# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 743
2. ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಡಾ: ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)
3. ಉತ್ತರಿಸುವ ದಿನಾಂಕ : 13.07.2023
4. ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಮಾದಕ ದ್ರವ್ಯ ಬಳಕೆ ಮತ್ತು ಸೇವನೆಯ ಪ್ರಕರಣಗಳು ದಿನೇ ದಿನೇ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದಲ್ಲಿ ಮಾದಕ ದ್ರವ್ಯ ಬಳಕೆ ಮತ್ತು ಸೇವನೆಯ ಪ್ರಕರಣಗಳು ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಡ್ರಗ್ಸ್ ನಿಯಂತ್ರಣ ಕಾಯಿದೆಯಡಿ ಈವರೆಗೆ ಸರ್ಕಾರ ಕೈಗೊಳ್ಳಲಾದ ಪ್ರಕರಣಗಳ ಹಾಗೂ ತೆಗೆದುಕೊಂಡಿರುವ ಕ್ರಮಗಳೇನು; (ವಿವರ ಒದಗಿಸುವುದು | ಡ್ರಗ್ಸ್ ಸೇವನೆ, ಮಾರಾಟ, ಸಾಗಾಣೆ, ಸಂಗ್ರಹ ಮುಂತಾದ ಅಪರಾಧಗಳನ್ನು ನಿಯಂತ್ರಿಸಲು ಆರೋಪಿಗಳ ವಿರುದ್ಧ ಎನ್.ಡಿ.ಪಿ.ಎಸ್. ಕಾಯ್ದೆ, 1985ರ ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಿಕೊಂಡು, ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಕಳೆದ ಮೂರು ವರ್ಷಗಳಲ್ಲಿ ಎನ್.ಡಿ.ಪಿ.ಎಸ್. ಕಾಯ್ದೆ ಅಡಿಯಲ್ಲಿ ಆರೋಪಿಗಳ ವಿರುದ್ಧ ದಾಖಲಿಸಿರುವ ಪ್ರಕರಣಗಳ ಸಂಖ್ಯೆ ಈ ಕೆಳಕಂಡಂತಿದೆ: |

| ವರ್ಷ | ಎನ್.ಡಿ.ಪಿ.ಎಸ್ ಕಾಯ್ದೆ ಅಡಿ ದಾಖಲಿಸಿರುವ ಪ್ರಕರಣಗಳ ಸಂಖ್ಯೆ | ಬಂಧಿಸಿರುವ ಆರೋಪಿಗಳ ಸಂಖ್ಯೆ |
|---|---|---|
| 2021 | 5787 | 6434 |
| 2022 | 6398 | 6065 |
| 2023 (ಜೂನ್ 15ರ ವರೆಗೆ) | 3181 | 2431 |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಇ) | ಡ್ರಗ್ಸ್ ಮಾರಾಟ ನಿಯಂತ್ರಣಕ್ಕೆ ಕಡಿವಾಣ ತರಲು ಕಟ್ಟುನಿಟ್ಟಿನ ಕ್ರಮಗೊಳ್ಳಲು ಸರ್ಕಾರ ಮುಂದಾಗುವುದೇ; | **ರಾಜ್ಯದಲ್ಲಿ ಡ್ರಗ್ಸ್ ಮಾರಾಟ ನಿಯಂತ್ರಿಸಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ.**<br><br>➢ ಸಾರ್ವಜನಿಕರ ಅನುಕೂಲಕ್ಕಾಗಿ ಟೋಲ್ ಫ್ರೀ ಸಂಖ್ಯೆ:1908 ಯನ್ನು ಸ್ಥಾಪಿಸಿ ದೂರವಾಣಿಯ ಮುಖಾಂತರ ಸಂಪರ್ಕಿಸಿ |

| | | |
|---|---|---|
| | | ಮಾಹಿತಿ ನೀಡುವ ಯೋಜನೆ ಪ್ರಾರಂಭಿಸಲಾಗಿದೆ.<br>➢ ಮಾದಕ ವಸ್ತುಗಳ ಮಾರಾಟ ಜಾಲವನ್ನು ಪತ್ತೆಹಚ್ಚಿ ಅವರ ಮೊಬೈಲ್ ಸಿ.ಡಿ.ಆರ್. ಅನ್ನು ವಿಶ್ಲೇಷಿಸಿ ಮಾದಕ ವಸ್ತುಗಳ ಮಾರಾಟದ ಮೂಲದ ಬಗ್ಗೆ ಮಾಹಿತಿ ಸಂಗ್ರಹಿಸಿ ಕ್ರಮ ಜರುಗಿಸಲಾಗುತ್ತಿದೆ.<br>➢ ಬಾರ್ ಮತ್ತು ರೆಸ್ಟೋರೆಂಟ್, ಕಾಫಿ-ಡೇ, ಪಬ್, ಮುಂತಾದ ಕಡೆ ಯುವಕರು ಹೆಚ್ಚಾಗಿ ಸೇರುವ ಸ್ಥಳಗಳು, ಶಾಲಾ ಕಾಲೇಜು ಆವರಣ, ಬಸ್ ನಿಲ್ದಾಣ ಹಾಗೂ ಇನ್ನಿತರೆ ಪ್ರದೇಶಗಳಲ್ಲಿ ಮಾದಕ ದ್ರವ್ಯ ವಸ್ತುಗಳನ್ನು ಮಾರಾಟ ಮಾಡುತ್ತಿರುವ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಿ ಕಾನೂನಿನ ರೀತಿ ಕ್ರಮ ಜರುಗಿಸಲಾಗುತ್ತಿದೆ.<br>➢ ಸಾರ್ವಜನಿಕರ ಗಮನ ಸೆಳೆಯಲು ಬ್ಯಾನರ್, ಪೋಸ್ಟರ್‌ಗಳನ್ನು ಜನಸಂದಣಿ ಇರುವ ಸ್ಥಳಗಳಲ್ಲಿ ಪ್ರದರ್ಶಿಸಿ ಕರಪತ್ರ ಹಂಚಲಾಗುತ್ತಿದೆ. ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಸಾಮಾಜಿಕ ಜಾಲ ತಾಣಗಳಲ್ಲಿ ಚುಟುಕು ವಿಡಿಯೋಗಳ ಮೂಲಕ ಜಾಗೃತಿ ಹಮ್ಮಿಕೊಂಡು ಮಾದಕ ವಸ್ತುಗಳ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಲಾಗುತ್ತಿದೆ.<br>➢ ಶಾಲಾ ಕಾಲೇಜುಗಳು, ವಿದೇಶಿಯರು ವಾಸಿಸುತ್ತಿರುವ ಪ್ರದೇಶಗಳು ಮತ್ತು ಕೊಳಚೆ ಪ್ರದೇಶಗಳಲ್ಲಿ ಸಾರ್ವಜನಿಕ ಸಭೆ, ಮೆರವಣಿಗೆಗಳನ್ನು ನಡೆಸುವುದರ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಲು, ಮಾದಕ ವಸ್ತುಗಳ ಸೇವನೆ ವಿರುದ್ಧ ಜಾಗೃತಿ ಮೂಡಿಸಲು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.<br>➢ ಮಾದಕ ದ್ರವ್ಯದ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಗೆ ಶಾಲಾ-ಕಾಲೇಜುಗಳಲ್ಲಿ ಮಾದಕ ವಸ್ತುಗಳ ಕುರಿತು ಜಾಗೃತಿ ಕಾರ್ಯಾಗಾರವನ್ನು ಆಯೋಜಿಸಿ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಉಪನ್ಯಾಸದ ಮೂಲಕ ವಿವರವಾಗಿ ತಿಳುವಳಿಕೆ ನೀಡಲಾಗುತ್ತಿದೆ. ಠಾಣಾ ಸರಹದ್ದಿನ ಬೀಟ್ ಮತ್ತು ಸಬ್-ಬೀಟ್‌ಗಳಲ್ಲಿ ಆಗಿಂದಾಗ್ಗೆ ಸಭೆಯನ್ನು ನಡೆಸಿ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.<br>➢ ಮಾದಕ ವಸ್ತುಗಳ ಮಾರಾಟ/ಸೇವನೆಯ ಪ್ರಕರಣಗಳಲ್ಲಿ ವಿದೇಶಿ ಆರೋಪಿಗಳಿಗೆ ಯಾವ ಮೂಲಗಳಿಂದ ಮಾದಕ ವಸ್ತುಗಳು ಸರಬರಾಜಾಗುತ್ತಿರುವ ಬಗ್ಗೆ ಸಂಪೂರ್ಣ ಮಾಹಿತಿ |

| | | |
|---|---|---|
| | | ಸಂಗ್ರಹಿಸಲು ಸೂಚಿಸಲಾಗಿದ್ದು, ಇಂತಹ ಕೃತ್ಯಗಳಲ್ಲಿ ತೊಡಗಿರುವ ವಿದೇಶಿಯರನ್ನು ದಸ್ತಗಿರಿ ಮಾಡಿ ಅವರುಗಳ ಪಾಸ್‌ಪೋರ್ಟ್‌ಗಳನ್ನು ಮುಟ್ಟುಗೋಲು ಹಾಕಿಕೊಂಡು ಕಾನೂನಿನ ಕ್ರಮ ಕೈಗೊಳ್ಳಲಾಗುತ್ತಿದೆ.<br>➢ ವಿದೇಶಿಯರು ವಾಸದ ಬಗ್ಗೆ ಮಾಹಿತಿಯನ್ನು ಸಂಬಂಧಪಟ್ಟ ಪೊಲೀಸ್ ಠಾಣೆಗಳಿಗೆ ಒದಗಿಸುವಂತೆ ಈಗಾಗಲೇ ಸುತ್ತೋಲೆಗಳನ್ನು ಹೊರಡಿಸಲಾಗಿದೆ. ವಿಶೇಷ ಕಾರ್ಯಚರಣೆಗಳನ್ನು ನಡೆಸಿ ಇಂತಹ ಕೃತ್ಯವೆಸಗುವಂತಹವರ ವಿರುದ್ಧ ಕಠಿಣ ಕಾನೂನಿನ ಕ್ರಮ ಕೈಗೊಳ್ಳಲಾಗುತ್ತಿದೆ.<br>➢ ಮಾದಕ ವಸ್ತುಗಳ ವ್ಯಸನಿಗಳನ್ನು ಗುರುತಿಸಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮುಖಾಂತರ ಡಿ-ಅಡಿಕ್ಷನ್ ಸೆಂಟರ್‌ಗಳಿಗೆ ಸೇರಿಸಲು ಕ್ರಮ ವಹಿಸಲಾಗುತ್ತಿದೆ.<br>➢ ಪದೇ ಪದೇ ಇಂತಹ ಕೃತ್ಯಗಳಲ್ಲಿ ತೊಡಗುವ ಡ್ರಗ್ ಪೆಡ್ಲರ್ಸ್‌ಗಳ ವಿರುದ್ಧ "Prevention of Illicit Traffic in Narcotics Drugs & Psychotropic Substances Act", 1988ರ ಅಡಿ ಪ್ರಕರಣ ದಾಖಲಿಸಿ ಕ್ರಮ ಜರುಗಿಸಲಾಗುತ್ತಿದೆ.<br>➢ ಠಾಣಾ ಸರಹದ್ದುಗಳಲ್ಲಿ ಹೊಯ್ಸಳ, ಚೀತಾ, ಅಧಿಕಾರಿ ಮತ್ತು ಸಿಬ್ಬಂದಿಗಳು ಗಸ್ತಿನಲ್ಲಿರುವ ಸಮಯದಲ್ಲಿ ಶಾಲಾ, ಕಾಲೇಜುಗಳ ಬಳಿ ಸೂಕ್ಷ್ಮವಾಗಿ ಗಮನಿಸಿ ಅಪರಿಚಿತ ವ್ಯಕ್ತಿಗಳ ಮಾಹಿತಿ ಸಂಗ್ರಹಿಸುವಂತೆ ಸೂಚಿಸಲಾಗಿದೆ. ಮಾದಕದ್ರವ್ಯ ಪದಾರ್ಥಗಳ ವಹಿವಾಟನ್ನು ತಡೆಗಟ್ಟಲು ಹಾಗೂ ಪತ್ತೆಮಾಡಲು ಹಾಗೂ ಹದಿಹರೆಯದ ಯುವಕ ಮತ್ತು ಯುವತಿಯರನ್ನು ಇಂತಹ ದುಶ್ಚಟಗಳಿಂದ ತಡೆಗಟ್ಟುವ ಸಲುವಾಗಿ ಎಲ್ಲಾ ರೀತಿಯ ಸಾಧ್ಯವಿರುವ ಪ್ರಯತ್ನಗಳನ್ನು ಮಾಡಲಾಗುತ್ತಿದೆ.<br>➢ ಕೊರಿಯರ್ಸ್/ಪೋಸ್ಟ್ ಮತ್ತು ಡಾರ್ಕ್‌ವೆಬ್ ಮೂಲಕ ಮಾದಕ ವಸ್ತುಗಳನ್ನು ಖರೀದಿಸುವವರ ಬಗ್ಗೆ ನಿಗಾವಹಿಸಿ ಕ್ರಮಜರುಗಿಸಲಾಗುತ್ತಿದೆ.<br>➢ ರಾಜ್ಯದಲ್ಲಿ 43 ಸೈಬರ್ ಎಕಾನಾಮಿಕ್ & ನಾರ್ಕೊಟಿಕ್ ಪೊಲೀಸ್ ಠಾಣೆ (CEN Police Station) ಸ್ಥಾಪಿತವಾಗಿದ್ದು, ಸದರಿ ಠಾಣೆಯು ಮಾದಕ ವಸ್ತುಗಳ ಚಟುವಟಿಕೆ ಕುರಿತು ನಿರಂತರವಾಗಿ ಮಾಹಿತಿಯನ್ನು ಕಲೆ ಹಾಕಿ ಪತ್ತೆ ಮಾಡುವಲ್ಲಿ ಕಾರ್ಯ ನಿರ್ವಹಿಸುತ್ತಿದೆ. |

| | | |
|---|---|---|
| ಈ) | ಡ್ರಗ್ಸ್ ನಿಯಂತ್ರಣ ಬಗ್ಗೆ ಇರುವ ಕಾಯ್ದೆಗೆ ತಿದ್ದುಪಡಿ ಮಾಡಿ, ಕಠಿಣ ಕಾನೂನು ತರಲು ಸರ್ಕಾರ ತೀರ್ಮಾನಿಸಿದೆಯೇ? (ವಿವರ ತಿಳಿಸುವುದು) | ಕೇಂದ್ರ ಸರ್ಕಾರವು ಡ್ರಗ್ಸ್ ನಿಯಂತ್ರಣದ ಬಗ್ಗೆ ಈಗಾಗಲೇ ಎನ್.ಡಿ.ಪಿ.ಎಸ್ ಕಾಯ್ದೆ, 1985 ಹಾಗೂ ಪಿ.ಐ.ಟಿ.ಎನ್.ಡಿ.ಪಿ.ಎಸ್. ಕಾಯ್ದೆ, 1988ನ್ನು ಜಾರಿಗೆ ತಂದಿರುತ್ತದೆ. ಈ ಕಾಯ್ದೆಗಳು ಕಠಿಣ ಕಾನೂನುಗಳಾಗಿರುತ್ತದೆ. ಪ್ರಸ್ತುತ ಸದರಿ ಕಾಯ್ದೆಗಳಿಗೆ ತಿದ್ದುಪಡಿಯ ಕುರಿತು ಯಾವುದೇ ಪ್ರಸ್ತಾವನೆ ಇರುವುದಿಲ್ಲ. |

ಒಇ 16 ಪಿಎನ್‌ಡಿ 2023(ಇ)

(ಡಾ: ಜಿ.ಪರಮೇಶ್ವರ)
ಗೃಹ ಸಚಿವರು